# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು – 572 103
ದೂರವಾಣಿ: 0816-2254546, 0816-2255596, 0816-2255597 ಫ್ಯಾಕ್ಸ್: 0816-2270719

ಸಂಖ್ಯೆ:ತು.ವಿ:ಖ.ಕೋ:2022-23/ 3391 ದಿನಾಂಕ:28.09.2022

## ದರಪಟ್ಟಿ ಆಹ್ವಾನ (ವಿ.ವಿ ವೆಬ್ ಸೈಟ್ ಮುಖಾಂತರ)

ವಿಷಯ: ವಿಶ್ವವಿದ್ಯಾನಿಲಯದ ಗ್ರಂಥಾಲಯದಲ್ಲಿರುವ DSpace ಮತ್ತು KOHA ತಂತ್ರಾಂಶವನ್ನು ಉನ್ನತೀಕರಣ ಹಾಗೂ ವಾರ್ಷಿಕ ನಿರ್ವಹಣೆ ಸಂಬಂಧ ದರಪಟ್ಟಿಗಳನ್ನು ಆಹ್ವಾನಿಸಿರುವ ಕುರಿತು.

ಉಲ್ಲೇಖ: 1. ಉಪಗ್ರಂಥಪಾಲಕರು, ತು.ವಿ.ತು ಇವರ ಮನವಿ ಪತ್ರ ದಿನಾಂಕ:12.09.2022
2. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:20.09.2022

*****

ವಿಶ್ವವಿದ್ಯಾನಿಲಯದ ಗ್ರಂಥಾಲಯದಲ್ಲಿ ಈಗಾಗಲೇ DSpace (7.3) ಹಾಗೂ KOHA (3.06) ತಂತ್ರಾಂಶವನ್ನು ಬಳಸಲಾಗುತ್ತಿದ್ದು, ಸದರಿ ತಂತ್ರಾಂಶಗಳನ್ನು ಉನ್ನತೀಕರಿಸುವ ಹಾಗೂ ವಾರ್ಷಿಕ ನಿರ್ವಹಣಾ ವೆಚ್ಚ (AMC) ಸಂಬಂಧ ಕೆಳಕಂಡ ಷರತ್ತುಗಳಿಗೊಳಪಟ್ಟು ದರಪಟ್ಟಿಗಳನ್ನು ಆಹ್ವಾನಿಸಲಾಗಿದ್ದು, ತಂತ್ರಾಂಶದ ವೈಶಿಷ್ಟತೆಗಳು ಈ ಕೆಳಕಂಡಂತಿವೆ.

| Sl. No. | Software Name & Specification | Rate to be Quoted (inclu. All taxes, processing, Installation and customization charges) |
|---|---|---|
| 01 | Koha Library Management Software(LMS) 22.5(Latest Version) | |
| 02 | DSpace (Institutional Repository for Faculty publications, report, question bank, abstract of thesis ) Software 7.3(Latest Version) | |
| | Total | |

ಷರತ್ತುಗಳು:

1. ಮುಚ್ಚಿದ ಲಕೋಟೆಯ ಮೇಲೆ " ತುಮಕೂರು ವಿಶ್ವವಿದ್ಯಾನಿಲಯ ಗ್ರಂಥಾಲಯಕ್ಕೆ DSpace ಮತ್ತು KOHA ಗೆ ಸಂಬಂಧಿಸಿದ ದರಪಟ್ಟಿ" ಎಂದು ನಮೂದಿಸತಕ್ಕದ್ದು.
2. ದರಪಟ್ಟಿಗಳನ್ನು ಕುಲಸಚಿವರು, ವಿಶ್ವವಿದ್ಯಾನಿಲಯ ಕಾರ್ಯಾಲಯ, ತುಮಕೂರು ವಿಶ್ವವಿದ್ಯಾನಿಲಯ, ಬಿ.ಹೆಚ್.ರಸ್ತೆ ತುಮಕೂರು-572 103, ಇವರಿಗೆ ಮುದ್ದಾಂ ಅಥವಾ ಅಂಚೆಯ ಮೂಲಕ ತಲುಪಿಸಬಹುದು. ಅಂಚೆಯ ವಿಳಂಬಕ್ಕೆ ಅಥವಾ ಅಂಚೆಯು ತಲುಪದಿದ್ದಕ್ಕೆ ವಿಶ್ವವಿದ್ಯಾನಿಲಯವು ಜವಾಬ್ದಾರರಾಗುವುದಿಲ್ಲ.
3. ದರಪಟ್ಟಿಯನ್ನು ಸಲ್ಲಿಸಲು ಕೊನೆಯ ದಿನಾಂಕ: 11.10.2022 ಅಪರಾಹ್ನ 12.00 ಗಂಟೆ.
4. ದರಪಟ್ಟಿಯನ್ನು ದಿನಾಂಕ: 11.10.2022 ರಂದು ಅಪರಾಹ್ನ 4.00 ಗಂಟೆಗೆ ತೆರೆಯಲಾಗುವುದು.
5. ದರಪಟ್ಟಿ ಸಲ್ಲಿಸುವ ಸಂಸ್ಥೆಯವರು ತಮ್ಮ ಸಂಸ್ಥೆಯ GSTIN No. ಮತ್ತು PAN No. ದಾಖಲೆಗಳನ್ನು ದರಪಟ್ಟಿಯ ಜೊತೆಗೆ ಲಗತ್ತಿಸಬೇಕು.
6. ದರಪಟ್ಟಿಯ ಅವಧಿಯು ದರಪಟ್ಟಿಯನ್ನು ತೆರೆದ ದಿನಾಂಕದಿಂದ 60 ದಿನಗಳ ಅವಧಿಯವರೆಗೆ ಚಾಲ್ತಿಯಲ್ಲಿರುತ್ತದೆ.
7. ಯಾವುದೇ ಮುಂಗಡ ಹಣವನ್ನು ನೀಡಲಾಗುವುದಿಲ್ಲ.
8. ದರಪಟ್ಟಿಯಲ್ಲಿ ನಮೂದಿಸಿದ ದರಗಳು ತೆರಿಗೆ ಮತ್ತು ಇತರೆ ವೆಚ್ಚವನ್ನು ಒಳಗೊಂಡಿರತಕ್ಕದ್ದು.
9. ದರಪಟ್ಟಿಗಳನ್ನು ಯಾವುದೇ ಕಾರಣ ನೀಡದೆ ಅಂಗೀಕರಿಸುವ ಅಥವಾ ತಿರಸ್ಕರಿಸುವ ಪೂರ್ಣ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.

(ಪು.ತಿ.ನೋ)

10. ದರಪಟ್ಟಿಗಳ ಆಯ್ಕೆಯ ವಿಷಯದಲ್ಲಿ ತುಮಕೂರು ವಿಶ್ವವಿದ್ಯಾನಿಲಯವು ರಚಿಸಿಕೊಂಡಿರುವ ನಿಯಮಾವಳಿಗೆ ಬದ್ಧವಾಗಿ ಆಯ್ಕೆ ಮಾಡಲಾಗುವುದು ಮತ್ತು ಇದರಲ್ಲಿ ವಿಶ್ವವಿದ್ಯಾನಿಲಯದ ತೀರ್ಮಾನವೇ ಅಂತಿಮವಾಗಿರುತ್ತದೆ.
11. ತಂತ್ರಾಂಶವು ಸರಿಯಾಗಿ ಕಾರ್ಯನಿರ್ವಹಿಸದೇ ಇದ್ದಲ್ಲಿ ಯಾವುದೇ ಕಾರಣ ನೀಡದೇ ಹುಂಡಿಯನ್ನು ಅಂಗೀಕರಿಸುವ ಮತ್ತು ತಿರಸ್ಕರಿಸುವ ಹಕ್ಕನ್ನು ವಿಶ್ವವಿದ್ಯಾನಿಲಯವು ಕಾಯ್ದಿರಿಸಿಕೊಂಡಿದೆ.
12. ಒಂದು ವರ್ಷದ ಅವಧಿಯವರೆಗೆ ತಂತ್ರಾಂಶದಲ್ಲಿ ಏನಾದರೂ ಸಮಸ್ಯೆಗಳು ಕಂಡುಬಂದಲ್ಲಿ ಯಾವುದೇ ಸೇವಾ/ಇತರೆ ಶುಲ್ಕವನ್ನು ವಿಧಿಸದೇ ತಾವೇ ತಮ್ಮ ಸಂಸ್ಥೆಯ ವತಿಯಿಂದ ಸ್ವಂತ ಖರ್ಚಿನಲ್ಲಿ ನಿರ್ವಹಣೆ ಮಾಡಿಕೊಡುವುದು.
13. ತಮ್ಮ ಸಂಸ್ಥೆಯಿಂದ ಸರಬರಾಜು ಮಾಡಲು ಉದ್ದೇಶಿಸಿರುವ ತಂತ್ರಾಂಶದ ಸಂರಚನೆಯಲ್ಲಿ ವ್ಯತ್ಯಾಸ ಇದ್ದರೆ ಸಂರಚನೆಯ ಮಾಹಿತಿಯನ್ನು ದರಪಟ್ಟಿಯೊಂದಿಗೆ ಕಡ್ಡಾಯವಾಗಿ ಸಲ್ಲಿಸುವುದು.
14. ಷರತ್ತು ಬದ್ಧ ದರಪಟ್ಟಿಗಳನ್ನು ಪರಿಗಣಿಸಲಾಗುವುದಿಲ್ಲ.
15. ಪ್ರತಿ ಸಂಸ್ಥೆಯವರು ಏಕೈಕ ದರಪಟ್ಟಿಯನ್ನು ಮಾತ್ರ ಸಲ್ಲಿಸತಕ್ಕದ್ದು.
16. ಆದೇಶದಲ್ಲಿ ನೀಡುವ ಎಲ್ಲಾ ಷರತ್ತುಗಳನ್ನು ಪಾಲಿಸಬೇಕು.
17. ಹೆಚ್ಚಿನ ವಿವರಗಳು ಅಥವಾ ಮಾಹಿತಿಯು ಅಗತ್ಯವಿದ್ದಲ್ಲಿ ಉಪಗ್ರಂಥಪಾಲಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು ಇವರನ್ನು ಸಂಪರ್ಕಿಸಬಹುದು.

ಆದೇಶದ ಮೇರೆಗೆ,

28/09/2022

ಉಪ ಕುಲಸಚಿವರು

ಉಪಕುಲಸಚಿವರು
(ಸಾಮಾನ್ಯ ವಿಭಾಗ)
ತುಮಕೂರು ವಿಶ್ವವಿದ್ಯಾನಿಲಯ
ತುಮಕೂರು

ಪ್ರತಿಗಳು:

1. ಹಣಕಾಸು ಅಧಿಕಾರಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಉಪಗ್ರಂಥಪಾಲಕರು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಮಾನ್ಯಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
4. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು. (ಇಂದೇ ವೆಬ್‌ಸೈಟ್‌ನಲ್ಲಿ ಪ್ರಕಟಿಸತಕ್ಕದ್ದು)
5. ಕಚೇರಿ ಪ್ರತಿ.